# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 21.10.2011**

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿರುವ ರಾತ್ರಿ ವಸತಿ ರಹಿತ ನಾಗರಿಕರಿಗಾಗಿ ಕಲ್ಪಿಸಿರುವ ತಂಗುದಾಣಗಳ ಉದ್ಘಾಟನೆಯನ್ನು ಶ್ರೀ ಎಂ. ಕೃಷ್ಣಪ್ಪ, ಮಾನ್ಯ ವಿಧಾನಸಭಾ ಸದಸ್ಯರು, ಬೆಂಗಳೂರು ದಕ್ಷಿಣ ರವರು ನೆರವೇರಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಲಯ ಜಂಟಿ ಆಯುಕ್ತರಾದ ಶ್ರೀ ಶಿವಬಸವಯ್ಯ ರವರು ಭಾರತದ ಸರ್ವೋಚ್ಚ ನ್ಯಾಯಾಲಯ ಮತ್ತು ಕರ್ನಾಟಕ ಸರ್ಕಾರವು ನೀಡಿರುವ ನಿರ್ದೇಶನದಂತೆ ರಾತ್ರಿ ವಸತಿ ರಹಿತ ನಾಗರಿಕರಿಗೆ ಪುನರ್ವಸತಿ ಕಲ್ಪಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಂದಾಗಿದ್ದು, ಪ್ರಥಮ ಬಾರಿಗೆ ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ಕೊತ್ತನೂರು ಜಂಬೂಸವಾರಿ ದಿಣ್ಣೆ ಮತ್ತು ವಸಂತಪುರದಲ್ಲಿರುವ ಎರಡು ಸಮುದಾಯ ಭವನಗಳಲ್ಲಿ ರಾತ್ರಿ ವಸತಿ ತಂಗುದಾಣಗಳನ್ನು ಒದಗಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಸಕರಾದ ಶ್ರೀ ಎಂ. ಕೃಷ್ಣಪ್ಪ ರವರು ಪ್ರಪ್ರಥಮವಾಗಿ ನಗರದಲ್ಲಿ ಪ್ರಾರಂಭಿಸಿರುವ ಈ ವಿನೂತನ ವ್ಯವಸ್ಥೆಯು ಅಭಿನಂದನೀಯವಾಗಿದೆ. ರಾತ್ರಿ ವಸತಿ ರಹಿತ ನಾಗರಿಕರಿಗೆ ತಂಗುದಾಣಗಳ ವ್ಯವಸ್ಥೆಗಾಗಿ ಶ್ರಮಪಟ್ಟ ಪಾಲಿಕೆಯ ಎಲ್ಲಾ ಅಧಿಕಾರಿಗಳನ್ನು ಶ್ಲಾಘಿಸಿದರು.

ತದನಂತರ ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು ಮಾತನಾಡಿ, ಸರ್ವೋಚ್ಚ ನ್ಯಾಯಾಲಯದ ಆದೇಶದ ಮೇರೆಗೆ ರಾತ್ರಿ ವಸತಿ ರಹಿತ ನಾಗರಿಕರಿಗೆ ವಸತಿ ಕಲ್ಪಿಸುವುದು ಅತ್ಯವಶ್ಯಕವಾಗಿರುತ್ತದೆ. ಆದ್ದರಿಂದ ಪ್ರಥಮವಾಗಿ ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ವಸತಿ ಪ್ರಾರಂಭಿಸಲಾಗಿರುತ್ತದೆ. ಸಾರ್ವಜನಿಕರು ಪಾಲಿಕೆಯ ಕಲ್ಯಾಣ ಇಲಾಖೆಯಲ್ಲಿನ ಹೆಚ್ಚು ಹೆಚ್ಚು ಯೋಜನೆಗಳ ಸವಲತ್ತುಗಳನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ರವರು ಮಾತನಾಡಿ, ರಾತ್ರಿ ವಸತಿ ರಹಿತ ನಾಗರಿಕರಿಗೆ ವಾಸಕ್ಕಾಗಿ ತಂಗುದಾಣಗಳನ್ನು ಪ್ರಾರಂಭಿಸಿರುವುದರಿಂದ ಒಟ್ಟು 108 ಜನರಿಗೆ (ಕುಟುಂಬಗಳು ಹಾಗೂ ಒಂಟಿ ವ್ಯಕ್ತಿಗಳು ಸೇರಿ) ವಸತಿಯನ್ನು ಕಲ್ಪಿಸಲಾಗಿದೆ. ಹಾಗೂ ಅವರಿಗೆ ತಂಗಲು ಬೇಕಾಗಿರುವ ಸಾಮಗ್ರಿಗಳು ಹಾಗೂ ರಾತ್ರಿ ಊಟದ ವ್ಯವಸ್ಥೆಯನ್ನು ಸಹ ಮಾಡಲಾಗಿರುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾತ್ರಿ ವಸತಿ ರಹಿತರಿಗೆ ಸಾಮಗ್ರಿಗಳ ಕಿಟ್‌ಗಳನ್ನು ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದ ನಿರುದ್ಯೋಗಿ ಯುವಕರಿಗೆ ವಾಹನಗಳ ವಿತರಣೆ ಮತ್ತು ಉನ್ನತ ವ್ಯಾಸಂಗದಲ್ಲಿರುವ ಕಾಲೇಜು ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿಯನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಣ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ರಮೇಶ್ ರಾಜು, ಮಾರುಕಟ್ಟೆ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀಮತಿ ರೂಪಾ ರಮೇಶ್, ಪಾಲಿಕೆ ಸದಸ್ಯರುಗಳಾದ ಶ್ರೀಮತಿ ಎಸ್.ಕೆ. ಪುಷ್ಪ, ಶ್ರೀಮತಿ ಎ. ವಿಜಯ ರಮೇಶ್, ಶ್ರೀ ಬಿ.ಎಸ್. ಮಂಜುನಾಥ ರೆಡ್ಡಿ, ಶ್ರೀ ಓ. ಮಂಜುನಾಥ್, ಶ್ರೀಮತಿ ಸುಗುಣ ಬಾಲಕೃಷ್ಣ, ಶ್ರೀ ಎಲ್. ರಮೇಶ್, ಶ್ರೀಮತಿ ಸುಕಂದ, ಶ್ರೀಮತಿ ಕವಿತಾ ಬಾಬುರಾಜು, ಶ್ರೀ ಎಂ. ಶ್ರೀನಿವಾಸ್, ಶ್ರೀ ಎ.ಎನ್. ಪುರುಷೋತ್ತಮ್, ಶ್ರೀಮತಿ ಎಸ್. ಶಶಿರೇಖಾ ಜಯರಾಂ, ಶ್ರೀ ಎಸ್. ಗಂಗಾಧರ್, ಶ್ರೀ ಕೆ. ಲತಾ, ಶ್ರೀ ಸೈಯದ್ ಹಸೀನಾ ತಾಜ್ ಹಾಗೂ ಉಪ ಆಯುಕ್ತರಾದ ಶ್ರೀ ಸಿ. ರಾಮ ಶೆಟ್ಟಿಗಾರ್ ಮತ್ತು ಸ್ಥಳೀಯ ಗಣ್ಯವ್ಯಕ್ತಿಗಳು ಉಪಸ್ಥಿತರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 21.10.2011

## ನಗರ ನೈರ್ಮಲ್ಯಕ್ಕೆ ಪಾಲಿಕೆ ಮುಂಜಾಗ್ರತೆ ಕ್ರಮ : ಆಯುಕ್ತರು

ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ತ್ಯಾಜ್ಯದಿಂದ ನಗರದ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಲು ಹಾಗೂ ಪಟಾಕಿ ಸಿಡಿಸುವುದರಿಂದ ಉಂಟಾಗುವ ಆಕಸ್ಮಿಕ ಘಟನೆಗಳಿಗೆ ಸಂಬಂಧಿಸಿದಂತೆ ಪಾಲಿಕೆ ಮುಂಜಾಗ್ರತಾ ಕ್ರಮ ಕೈಗೊಂಡಿದೆ.

ಸಾರ್ವಜನಿಕರು ದೀಪಾವಳಿ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸುವುದರೊಂದಿಗೆ ಪರಿಸರ ಮಾಲಿನ್ಯಗೊಳ್ಳದಂತೆ ಎಚ್ಚರಿಕೆ ವಹಿಸಬೇಕು. ಪಟಾಕಿಗಳನ್ನು ಸಿಡಿಸಿದಾಗ ಅದರಿಂದ ಅಪಾಯಕಾರಿ ಅನಿಲ ಉತ್ಪತ್ತಿಯಾಗಿ ಮಕ್ಕಳ ಆರೋಗ್ಯದ ಮೇಲೆ ಮತ್ತು ವಾತಾವರಣದಲ್ಲಿ ಸೇರಿಕೊಂಡು ಶ್ವಾಸಕೋಶಕ್ಕೆ ಸಂಬಂಧಿಸಿದ ಕಾಯಿಲೆಗಳು ಉಲ್ಬಣಗೊಳ್ಳುತ್ತವೆ. ಆದ್ದರಿಂದ ಸಾರ್ವಜನಿಕರು ಆದಷ್ಟು ಕಡಿಮೆ ಹಾನಿಕಾರಕ ಪಟಾಕಿಗಳನ್ನು ಸಿಡಿಸಿ, ಪರಿಸರ ರಕ್ಷಣೆಗಾಗಿ ಮುಂದಾಗಬೇಕೆಂದು ಆಯುಕ್ತರು ಮನವಿ ಮಾಡಿದ್ದಾರೆ.

ಸಾರ್ವಜನಿಕರು ಹಬ್ಬದ ದಿನಗಳಲ್ಲಿ ಪಾದಚಾರಿ ಮಾರ್ಗಗಳ ಮೇಲೆ ಪೂಜೆ ಮತ್ತು ಇತರೆ ಸಾಮಾಗ್ರಿಗಳನ್ನು ಮಾರಾಟ ಮಾಡುವುದು, ಪಟಾಕಿಗಳ ಮಾರಾಟ ಮಳಿಗೆಗಳನ್ನು ಇಡುವುದು, ಮಾರಾಟ ಮಾಡಿ ಉಳಿದ ತ್ಯಾಜ್ಯ ವಸ್ತುಗಳನ್ನು ರಸ್ತೆಯ ಮೇಲೆ ಹಾಕುವುದು, ಹೀಗೆ ಮುಂತಾದ ಚಟುವಟಿಕೆಗಳನ್ನು ಕೈಗೊಳ್ಳುವುದರಿಂದ ನಗರದ ಸೌಂದರ್ಯಕ್ಕೆ ಧಕ್ಕೆ ಬರುತ್ತದೆ. ಇದರಿಂದ ನಗರದ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಲು ಕಷ್ಟಕರವಾಗುತ್ತದೆ.

ಬೆಂಗಳೂರು ನಗರದಲ್ಲಿ ಪ್ರತಿದಿನ 3500 ಟನ್ ಕಸ ನಿರ್ವಹಣೆಯಾಗುತ್ತಿದೆ. ಆಯುಧ ಪೂಜೆ ಸಂದರ್ಭದಲ್ಲಿ ಇದರ ಪ್ರಮಾಣ 14,000 ಟನ್‌ಗಳಷ್ಟು ಹೆಚ್ಚಾಗಿದ್ದು, ಈ ವರ್ಷ ನಗರದಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿಗಳ ವಹಿವಾಟು ನೂರಾರು ಕೋಟಿ ಇರುವುದರಿಂದ ಪಟಾಕಿ ತ್ಯಾಜ್ಯ ಹೆಚ್ಚಿನ ಪ್ರಮಾಣದಲ್ಲಿ ಶೇಖರಣೆಯಾಗುತ್ತದೆ. ಈ ತ್ಯಾಜ್ಯವು ರಸ್ತೆ, ಚರಂಡಿಗಳಲ್ಲಿ ತುಂಬಿಕೊಂಡು ಮಳೆ ನೀರು ಸರಾಗವಾಗಿ ಹರಿಯಲು ಅಡಚಣೆಯುಂಟಾಗುತ್ತದೆ. ಇದರಿಂದ ಪರಿಸರ ಮಾಲಿನ್ಯ ಮತ್ತು ಹಲವು ವಿಪತ್ತುಗಳಿಗೆ ಕಾರಣವಾಗುತ್ತದೆ.

ಈ ಸಂದರ್ಭದಲ್ಲಿ ಪಾಲಿಕೆಯ ಆಯುಕ್ತರು ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರಿಗೆ ಮತ್ತು ಸಾರ್ವಜನಿಕರಲ್ಲಿ ಮನವಿ ಮಾಡಿ, ನಗರದ ಸುತ್ತಮುತ್ತ ಸ್ವಚ್ಛತೆಯನ್ನು ಕಾಪಾಡಲು ಈ ಕೆಳಕಂಡ ಅಂಶಗಳನ್ನು ಪಾಲಿಸಲು ಸೂಚಿಸಿರುತ್ತಾರೆ.

1) ಸಾರ್ವಜನಿಕರು ಪಟಾಕಿ ತ್ಯಾಜ್ಯಗಳನ್ನು ಯಾವುದೇ ಕಾರಣಕ್ಕೂ ರಸ್ತೆ ಬದಿ ಮೋರಿಗಳಿಗೆ ಹಾಕದಂತೆ ಎಚ್ಚರವಹಿಸಲು ಮತ್ತು ತ್ಯಾಜ್ಯಗಳನ್ನು ಒಂದೆಡೆ ಗುಡ್ಡೆ ಹಾಕಿ, ಪಾಲಿಕೆಯ ತಳ್ಳುವ ಗಾಡಿಗಳಿಗೆ ನೀಡುವುದು.
2) ಪಾಲಿಕೆಯ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ರಸ್ತೆಗಳನ್ನು ಸ್ವಚ್ಛಗೊಳಿಸುವಾಗ ಮೋರಿಯ ಮುಂಭಾಗದಲ್ಲಿ ನೀರು ಸರಾಗವಾಗಿ ಹರಿಯದಂತೆ ಕಟ್ಟಿಕೊಂಡಿರುವ ಕಸ, ಕಾಗದದ ಚೂರುಗಳು, ಪ್ಲಾಸ್ಟಿಕ್ ಚೂರುಗಳನ್ನು ತೆಗೆದು, ಸಮರ್ಪಕವಾದ ರೀತಿಯಲ್ಲಿ ಸ್ವಚ್ಛತಾ ಕೆಲಸವನ್ನು ನಿರ್ವಹಿಸುವುದು.
3) ಪಾಲಿಕೆ ಸಿಬ್ಬಂದಿ ವರ್ಗದವರು ರಸ್ತೆಗಳನ್ನು ಸ್ವಚ್ಛಗೊಳಿಸುವಾಗ ಸಾರ್ವಜನಿಕರು ವಾಹನಗಳನ್ನು ರಸ್ತೆ ಬದಿಯಲ್ಲಿ ನಿಲ್ಲಿಸಿರುವುದರಿಂದ ಸ್ವಚ್ಛತಾ ಕೆಲಸಕ್ಕೆ ಅಡ್ಡಿಯುಂಟಾಗುತ್ತದೆ. ಆದ್ದರಿಂದ ಸಾರ್ವಜನಿಕರು ಪಾಲಿಕೆ ಸಿಬ್ಬಂದಿ ವರ್ಗದವರೊಡನೆ ಸಹಕರಿಸಿ, ಸ್ವಚ್ಛತೆಗೆ ಅನುವು ಮಾಡಿಕೊಡುವುದು.
4) ಸಾರ್ವಜನಿಕರು ಪಟಾಕಿಗಳನ್ನು ಹಾರಿಸುವಾಗ ಆಕಸ್ಮಿಕ ಅವಗಡಕ್ಕೆ ಒಳಗಾದಲ್ಲಿ ಅಂತಹವರಿಗೆ ತುರ್ತು ಚಿಕಿತ್ಸೆ ನೀಡಲು ಪಾಲಿಕೆಯ ಎಲ್ಲಾ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.
5) ಕಾರ್ಯಪಾಲಕ ಅಭಿಯಂತರರು ತಮ್ಮ ತಮ್ಮ ವಾರ್ಡ್‌ಗಳಲ್ಲಿ ಪಾಲಿಕೆಯಿಂದ ಕೈಗೊಳ್ಳಲಾದ ಸ್ವಚ್ಛತಾ ಕಾರ್ಯದ ಮೇಲ್ವಿಚಾರಣೆಯನ್ನು ನಡೆಸುವುದು. ಮತ್ತು ಯಾವುದೇ ಸಮಸ್ಯೆಗಳಿಗೆ ಎಡೆಮಾಡಿಕೊಡದೇ ಸಮರ್ಪಕವಾಗಿ ನಿಭಾಯಿಸಿ, ಪರಿಹಾರ ಕ್ರಮ ಕೈಗೊಳ್ಳುವುದು.
6) ದೂರುಗಳಿದ್ದಲ್ಲಿ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ: 22660000 / 22221188, 22975595 ಸಂಪರ್ಕಿಸಿ.

ಸಾರ್ವಜನಿಕರು ನಗರ ಸ್ವಚ್ಛತೆ ಮತ್ತು ನೈರ್ಮಲ್ಯ ಕಡೆಗೆ ವಿಶೇಷ ಗಮನ ಹರಿಸಿ, ಮನೆ ಮುಂದೆ ಮತ್ತು ರಸ್ತೆ ಮೇಲೆ ಹರಡಿರುವ ಕಸವನ್ನು ಸಂಗ್ರಹಿಸಿ, ಪಾಲಿಕೆ ಆಟೋ / ತಳ್ಳುವ ಗಾಡಿಗಳಿಗೆ ನೀಡಲು ಪಾಲಿಕೆ ಕೋರಿದೆ.

ಸಾರ್ವಜನಿಕರು ಈ ಮೇಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಹಬ್ಬವನ್ನು ಸಂಭ್ರಮದಿಂದ ಆಚರಿಸುವುದರ ಜೊತೆಗೆ ನಗರ ನೈರ್ಮಲ್ಯ ಕಾಪಾಡಲು ಪಾಲಿಕೆಯೊಂದಿಗೆ ಸಹಕರಿಸಬೇಕಾಗಿ ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ಅವರು ತಿಳಿಸಿರುತ್ತಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 21.10.2011**

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನಂ.165, ಗಣೇಶ ಮಂದಿರದಲ್ಲಿ ಬಿಬಿಎಂಪಿ ಮತ್ತು ಪಿ.ಇ.ಎಸ್. ಸಂಸ್ಥೆ ಜಂಟಿ ಸಹಭಾಗಿತ್ವದಲ್ಲಿ 300 ವಿವಿಧ ಜಾತಿಯ ಸಸಿಗಳನ್ನು ನೆಡುವ ಕಾರ್ಯಕ್ರಮ ಹಮ್ಮಿಕೊಂಡು, ವಾರ್ಡ್‌ನ ವಿಶಾಲವಾದ ಪಾದಚಾರಿ ಮಾರ್ಗ ಇರುವ ರಸ್ತೆಗಳಲ್ಲಿ ಸ್ಥಳಾವಕಾಶ ಇರುವ ಕಡೆ ಸಸಿಗಳನ್ನು ನೆಡಲಾಯಿತು. ಪಿ.ಇ.ಎಸ್. ಸಂಸ್ಥೆಯವರು 300 ಟ್ರೀಗಾರ್ಡ್‌ಗಳನ್ನು ಒದಗಿಸಿದ್ದಾರೆ.

ಸಾರ್ವಜನಿಕರ ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಈ ವರ್ಷ ವ್ಯಾಪಕವಾಗಿ ನಗರಾದ್ಯಂತ ಸಸಿಗಳನ್ನು ನೆಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ. ಪಾಲಿಕೆಯಿಂದ 40 ಸಾವಿರ ಟ್ರೀಗಾರ್ಡ್ ಖರೀದಿಸಲಾಗುತ್ತಿದೆ. ಸುಮಾರು 50 ಸಾವಿರ ಟ್ರೀ ಗಾರ್ಡ್‌ಗಳನ್ನು ಸಂಘ ಸಂಸ್ಥೆಯವರು / ಖಾಸಗಿ ವ್ಯಕ್ತಿಗಳು ಒದಗಿಸಿದ್ದಾರೆ. ಪರಿಸರ ಕಾಪಾಡುವ ಮಹತ್ಕಾರ್ಯಕ್ಕೆ ಸಾರ್ವಜನಿಕರು ಪಾಲಿಕೆಗೆ ಸಾಕಷ್ಟು ಸಹಕಾರ ನೀಡಿದ್ದಾರೆ ಎಂದು ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ತಿಳಿಸಿದರು.

ಸಸಿಗಳನ್ನು ಸಂರಕ್ಷಿಸಲು ಬೇಸಿಗೆಯಲ್ಲಿ ನೀರು ಒದಗಿಸಲು ಅವಶ್ಯಕತೆ ಇರುವ ಇನ್ನೂ 6 ವಾಟರ್ ಟ್ಯಾಂಕರ್‌ಗಳನ್ನು ಖರೀದಿಸಲಾಗುವುದು. ಈಗಾಗಲೇ ಕೆಲವು ದೊಡ್ಡ ದೊಡ್ಡ ಸಂಘ ಸಂಸ್ಥೆಗಳಿಗೆ ಸಂಪರ್ಕಿಸಲಾಗಿದ್ದು, ವಾಟರ್ ಟ್ಯಾಂಕರ್‌ಗಳನ್ನು ಕೂಡಾ ಪಾಲಿಕೆಗೆ ಉಚಿತವಾಗಿ ನೀಡುವುದಾಗಿ ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದರು. ಬೇಸಿಗೆಯಲ್ಲಿ ಪಾಲಿಕೆಯಿಂದ ಸಸಿಗಳನ್ನು ಸಂರಕ್ಷಿಸಲು ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯರುಗಳಾದ ಶ್ರೀ ಎಲ್.ಗೋವಿಂದರಾಜ್, ಶ್ರೀ ಎಲ್.ಶ್ರೀನಿವಾಸ್, ಶ್ರೀ ಹೆಚ್. ನಾರಾಯಣ ಮತ್ತು ದಕ್ಷಿಣ ವಲಯದ ಮುಖ್ಯ ಅಭಿಯಂತರರಾದ ಶ್ರೀ ಪ್ರಕಾಶ್, ಕಾರ್ಯಪಾಲಕ ಅಭಿಯಂತರರಾದ ಶ್ರೀ ಶ್ರೀಕಂಠೇಗೌಡ ಹಾಗೂ ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**